ಉದಯವಾಣಿ
ಕನ್ನಡ ದಿನಪತ್ರಿಕೆ

**Friday, January 21st, 2011**

**ಜೈನ್ ಯೂನಿವರ್ಸಿಟಿ:** ವಿವಿಪುರಂ. ಡಾ. ಸಂದೀಪ್ ಶಾಸ್ತ್ರಿ ಅವರು ಬರೆದಿರುವ 'ಕರ್ನಾಟಕ ಪಾಲಿಟಿಕ್' ಪುಸ್ತಕ ಬಿಡುಗಡೆ. ರಾಜ್ಯಪಾಲ ಹಂಸರಾಜ್ ಭಾರದ್ವಾಜ್. ಬೆಳಗ್ಗೆ 11.



**ಬೆಂಗಳೂರಿನಲ್ಲಿ ಗುರುವಾರ ಪುಸ್ತಕ ಬಿಡುಗಡೆ ಸಮಾರಂಭಕ್ಕೆ ಆಗಮಿಸಿದ ರಾಜ್ಯಪಾಲರನ್ನು ಜೈನ್ ಶಿಕ್ಷಣ ಸಮೂಹದ ಮುಖ್ಯಸ್ಥ ಚೆನ್‌ರಾಜ್ ಜೈನ್ ಸ್ವಾಗತಿಸಿದರು.**

ಜೈನ್ ವಿಶ್ವವಿದ್ಯಾಲಯದಲ್ಲಿ ಗುರುವಾರ ಏರ್ಪಡಿಸಿದ್ದ 'ಕರ್ನಾಟಕ ಪಾಲಿಟಿಕ್ಸ್' ಕೃತಿ ಬಿಡುಗಡೆ ಸಮಾರಂಭದ ನಂತರ ಸುದ್ದಿಗಾರರ ಪ್ರಶ್ನೆಗಳಿಗೆ ಉತ್ತರಿಸಿದ ಅವರು, 'ಭೂ ಹಗರಣಕ್ಕೆ ಸಂಬಂಧಿಸಿದಂತೆ ನಾನು ಯಾವುದೇ ರೀತಿಯ ಹಸ್ತಕ್ಷೇಪ ಮಾಡಿಲ್ಲ. ಎರಡು ಮೂರು ತಿಂಗಳಿನಿಂದ ರಾಜ್ಯದಲ್ಲಿ ಏನೇನೂ ಆಗುತ್ತಿದೆ ಎಂಬುದು ಎಲ್ಲರಿಗೂ ಗೊತ್ತಿರುವ ವಿಚಾರ. ಪತ್ರಿಕೆಗಳೇ ಆ ವಿಷಯದಲ್ಲಿ ಸಾಕಷ್ಟು ಬೆಳಕು ಚೆಲ್ಲಿವೆ. ಸಂವಿಧಾನದ ಮುಖ್ಯಸ್ಥನಾದ ನನಗೆ ದೂರು ಬಂದಾಗ ಸಂವಿಧಾನದ ಚೌಕಟ್ಟಿನಲ್ಲಿ ನನಗಿರುವ ಅಧಿಕಾರದ ವ್ಯಾಪ್ತಿಯಲ್ಲೇ ಕೆಲಸ ಮಾಡಬೇಕಾಗುತ್ತದೆ' ಎಂದು ಮಾರ್ಮಿಕವಾಗಿ ನುಡಿದರು.